ಕುಷ್ಟಗಿ ತಾಲೂಕು ಪಂಚಾಯತಿ: ಗ್ರಾಮ ಪಂಚಾಯತಿಯ ವಿಶೇಷಚೇತನ ಕಾರ್ಯಕರ್ತರ ಪೂರ್ವಭಾವಿ ಸಭೆ

ವಿಶೇಷ ಚೇತನರು ಮತದಾನದಿಂದ ಹೊರಗುಳಿಯದಂತೆ ಕ್ರಮವಹಿಸಿರಿ: ಇಒ ನಿಂಗಪ್ಪ ಎಸ್. ಮಸಳಿ



ಕೊಪ್ಪಳ, ಮೇ 02 : ಮೇ–7ರಂದು ಸಾರ್ವತ್ರಿಕ ಲೋಕಸಭಾ ಚುನಾವಣೆ ಜರುಗಲಿದ್ದು, ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಎಲ್ಲಾ ಹಿರಿಯ ನಾಗರಿಕರು ಹಾಗೂ ವಿಶೇಳಚೇತನರು ಮತದಾನದಿಂದ ಹೊರಗುಳಿಯದಂತೆ ವಿಶೇಳಚೇತನ ಕಾರ್ಯಕರ್ತರು ಕ್ರಮವಹಿಸಬೇಕೆಂದು ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ತಾಲೂಕ ಸ್ವೀಪ್ ಸಮಿತಿ ಅಧ್ಯಕ್ಷರಾದ ನಿಂಗಪ್ಪ ಎಸ್.ಮಸಳಿ ಕರೆ ನೀಡಿದರು.ಗುರುವಾರದಂದು ತಾಲೂಕಿನ ಎಲ್ಲಾ ಗ್ರಾಮ ಪಂಚಾಯತಿಗಳ ವಿಶೇಳಚೇತನರ ಕಾರ್ಯಕರ್ತರು ಚುನಾವಣೆ ದಿನದಂದು ವಹಿಸಬೇಕಾದ ಕ್ರಮಗಳ ಕುರಿತು ಕುಷ್ಟಗಿ ತಾಲೂಕ ಪಂಚಾಯತಿಯಲ್ಲಿ ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು. ಮೇ 07 ರಂದು ವಿಶೇಷ ಚೇತನರಿಗೆ ಅನುಕೂಲವಾಗುವಂತೆ ಎಲ್ಲ ಮತಗಟ್ಟೆಗಳಲ್ಲಿ ಈಗಾಗಲೇ ವೀಲ್ ಚೇರ್ ವ್ಯವಸ್ಥೆ ಕಲ್ಪಿಸಿದ್ದು, ಮುಂಜಾನೆಯ ಅವಧಿಯೊಳಗಾಗಿ ಎಲ್ಲರೂ ಮತ ಚಲಾಯಿಸುವಂತೆ ಕ್ರಮವಹಿಸಬೇಕು ಎಂದು ಅವರು ತಿಳಿಸಿದರು.

ಲೋಕಸಭಾ ಚುನಾವಣೆಯಲ್ಲಿ ಶೇ.100 ರಳ್ಳು ವಿಶೇಳಚೇತನರು ಮತದಾನ ಮಾಡುವಂತೆ ಅದರ ಪೂರ್ವಭಾವಿಯಾಗಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸಭೆ ಜರುಗಿಸಬೇಕೆಂದರು. ಪ್ರತಿ ಮತ ಅಮೂಲ್ಯವಾದುದು ಕುಳ್ಳಗಿ ತಾಲೂಕಿನಲ್ಲಿ ಎಲ್ಲಾ ವಿಶೇಳಚೇತನರು ಶೇ.100 ಮತ ಚಲಾಯಿಸಿ ರಾಜ್ಯಕ್ಕೆ ಉತ್ತಮ ಸಂದೇಶ ಸಾರೋಣ ಎಂದರು. ಸಭೆಯಲ್ಲಿ ಕುಳ್ಳಗಿ ತಾಲೂಕ ಪಂಚಾಯತ್ ಸಹಾಯಕ ನಿರ್ದೇಶಕರಾದ ನಿಂಗನಗೌಡ ವಿ.ಹೆಚ್ ಅವರು ಮತದಾರರ ಪ್ರತಿಜ್ಞಾ ವಿಧಿ ಬೋಧಿಸಿದರು. ಈ ಸಂದರ್ಭದಲ್ಲಿ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಯಲ್ಲಮ್ಮ, ತಾಲೂಕ ಪಂಚಾಯತ್ ಸಿಬ್ಬಂದಿಗಳಾದ ಸಂಗಪ್ಪ ನಂದಾಪುರ, ಚಂದ್ರಶೇಖರ್ ಜಿ.ಹಿರೇಮಠ್, ತಾಲೂಕ ವಿಶೇಳಚೇತನರ ಕಾರ್ಯಕರ್ತ ಚಂದ್ರಶೇಖರ್ ಹಿರೇಮನ, ತಾಲೂಕಿನ ಎಲ್ಲಾ ಗ್ರಾಮ ಪಂಚಾಯತಿಗಳ ವಿಶೇಳಚೇತನರ ಕಾರ್ಯಕರ್ತರು ಹಾಜರಿದ್ದರು.

ದೇಶದ ಅಭಿವೃದ್ಧಿಗೆ ಚಾರ್ಟರ್ಡ್ ಅಕೌಂಟೆಂಟ್ ಪಾತ್ರ ಬಹಳ ಮುಖ್ಯ: ಜಗದೀಶ್ ಶೆಟ್ಟರ್

ಬಳಗಾವಿ: ದೇಶದ ಅಭಿವೃದ್ಧಿಗೆ ಚಾರ್ಟರ್ಡ್ ಅಕೌಂಟೆಂಟ್ ಪಾತ್ರ ಬಹಳ ಮುಖ್ಯವಾಗಿದೆ. ಚಾರ್ಟರ್ಡ್ ಅಕೌಂಟೆಂಟ್ ಸರಿಯಾದ ಸಂದರ್ಭ ದಲ್ಲಿ ಔದ್ಯೋಗಿಗಳಿಗೆ ಆರ್ಥಿಕವಾಗಿ ಸಲಹೆ ನೀಡುವುದರಿಂದ ದೇಶದ ಅರ್ಥಿಕತೆ ಹೆಚ್ಚು ಪ್ರಗತಿ ಕಾಣುತ್ತದೆ ಎಂದು ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು ತಿಳಿಸಿದ್ದಾರೆ. ಗುರುವಾರ ರಾತ್ರಿ ಚುನಾವಣಾ ಪ್ರಚಾರದ ನಿಮಿತ್ಯ ಚಾರ್ಟರ್ಡ್ ಅಕೌಂಟೆಂಟ್ ಅಸೋಸಿಯೇಷನ್, ಕಂಪನಿಯ ಸೆಕ್ರೆಟರಿ ಹಾಗೂ ಟ್ಯಾಕ್ಸ್ ಪ್ರ್ಯಾಕ್ಟೀಸನರ್ ಜೊತೆ ಸಂವಾದ ನಡೆಸಿ ಮಾತನಾಡಿದ ಅವರು, ಸರಿಯಾದ ಸಂದರ್ಭದಲ್ಲಿ ಟ್ಯಾಕ್ಸ್ ಗೆ ಸಂಭಂದಿಸಿದ ಮಾಹಿತಿ ಉದ್ಯೋಗಪತಿಗಳಿಗೆ ನೀಡುವ ಕೆಲಸ ಚಾರ್ಟರ್ಡ್ ಅಕೌಂಟೆಂಟ್ಸ್ ಮಾಡುತ್ತಾರೆ. ದೇಶದಲ್ಲಿ ಒಂದೆ ತೇರಿಗೆ ನೀತಿ ಮೋದಿಯವರು ಜಾರಿಗೆ ತಂದಿದ್ದಾರೆ ಜಿಎಸ್ ಟಿ ಜಾರಿಗೆ ತಂದಿದ್ದರಿಂದ ದೇಶದ ಅರ್ಥಿಕತೆ ಬೆಳವಣಿಗೆಗೆ ಸಹಕಾರ ಆಗಿದೆ. ಜಿಎಸ್ ಟಿ ಜಾರಿಗೆ ತಂದಿದ್ದರಿಂದ ವ್ಯಾಪಾರಸ್ಥರಿಗೆ ಅನೂಕುಲ ಆಗಿದೆ. ಮೋದಿಯವರ ಆರ್ಥಿಕ ನೀತಿಯಿಂದ ದೇಶ ಗಟ್ಟಿ ಆಗಿದೆ. 10–15 ವರ್ಷದಲ್ಲಿ ಭಾರತ ಸೂಪರ್ ಪಾವರ್ ಆಗುವ ಮೂಲಕ ನವಂಬರ್ ಒನ್ ಆಗಲಿದೆ ಎಂದು ತಿಳಿಸಿದರು.

ಲೋಕಸಭಾ ಚುನಾವಣೆ ಸ್ಪರ್ಧೆ ಮಾಡಲು ಹಿರಿಯರು ಆಶಿರ್ವಾದ ಮಾಡಿದ್ದರಿಂದ ಮೋದಿಯವರ ಪ್ರತಿನಧಿಯಾಗಿ ನಾನು ಸ್ಪರ್ಧೆ ಮಾಡುತ್ತಿದ್ದೇನೆ. ಇಡೀ ಬೆಳಗಾವಿ ಜಿಲ್ಲೆಯಲ್ಲಿ ಎಲ್ಲಾ ವರ್ಗದ ಜನರು ಬೆಂಬಲ ಸೂಚನೆ ನೀಡುತ್ತಿದ್ದಾರೆ. ಈ ಭಾಗದಲ್ಲಿ ಉದ್ಯೋಗ ಸೃಷ್ಟಿ ಮಾಡಿ ನಮ್ಮ ಯುವಕರು ಬೆಂಗಳೂರು, ಪುಣೆ ಹೊಗುವದನ್ನು ತಪ್ಪಿಸುತ್ತೇನೆ ಎಂದು ಜಗದೀಶ್ ಶೆಟ್ಟರ್ ಅವರು ತಿಳಿಸಿದರು.

ಈ ವೇಳೆ ರಾಜ್ಯ ಬಿಜೆಪಿ ಉಪಧ್ಯಕ್ಷ ಅನಲ ಬೆನಕೆ, ರಾಜ್ಯ ಬಿಜೆಪಿ ವಕ್ತಾರ ಎಂ.ಬಿ ಜಿರಳಿ, ಜಿತೇಶ ಗಬ್ಬುರ, ವಿಲಾಸ್ ಹಾಲಬಾವಿ, ದಿಪ್ತಿ ಅಡಕೆ, ಅರವಿಂದ ದೇಶಪಾಂಡೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಭ್ರಷ್ಟಾಚಾರ ಮತ್ತು ಕುಟುಂಬ ರಾಜಕಾರಣ ಸಂವಿಧಾನಕ್ಕೆ ಗಂಡಾಂತರ

ಯಮಕನಮರಡಿ :– ಕಳೆದ ಎರಡು ದಶಕಗಳಿಂದ ಯಮಕನಮರಡಿ ಭಾಗದಲ್ಲಿ ಅಭಿವೃದ್ಧಿ ಸ್ವಾತಂತ್ರ್ಯ ಹತ್ತಿಕ್ಕುವ ಹುನ್ನಾರ ನಡೆದಿದ್ದು, ಕುಟುಂಬ ರಾಜಕಾರಣಕ್ಕೆ ಅಂತ್ಯ ಹೇಳಬೇಕೆಂದು ಚಿಕ್ಕೋಡಿ ಲೋಕಸಭಾ ಪಕ್ಷೇತರ ಅಭ್ಯರ್ಥಿ ಶಂಭು ಕಲ್ಲೋಳಿಕರ ಹೇಳಿದರು.

ಅವರು ಬುಧವಾರ ದಿ. 01 ರಂದು ಯಮಕನಮರಡಿಯಲ್ಲಿ ಮತಯಾಚಿಸಿ ಮಾತನಾಡಿದರು. ದೇಶದಲ್ಲಿ ಜಾತಿ ಧರ್ಮ ಭಾಷೆ ಹೆಸರಿನಲ್ಲಿ ರಾಜಕಾರಣ ನಡೆಯುತ್ತಿದ್ದು, ಇದು ಪ್ರಜಾಪ್ರಭುತ್ವಕ್ಕೆ ಮಾರಕವಾಗಿದೆ ಚಿಕ್ಕೋಡಿ ಜಿಲ್ಲೆ ರಚನೆಗೆ ಹಿಂದಿನ ಮುಖ್ಯಮಂತ್ರಿ ದಿವಂಗತ ಜೆ.ಎಚ್. ಪಟೇಲ ಅವರು ಗೆಜೆಟ್ ಪಾಸ ಮಾಡಿ 20 ವರ್ಷಗಲು ಕಳೆದು ಹೋದರು ಇನ್ನೂವರೆಗೆ ಚಿಕ್ಕೋಡಿ ಜಿಲ್ಲೆಯಾಗಿಲ್ಲ. ಎರಡು ರಾಜಕೀಯ ಪಕ್ಷಗಳು ನಿಷ್ಕ್ರಿಯಗೊಂಡಿವೆ. ಕಾಂಗ್ರೇಸ್ ಸರ್ಕಾರದ ಗ್ಯಾರಂಟಿ ಯೋಜನೆಗಳು ಜನರನ್ನು ಅಬಲಿಕರಣ ಮಾಡುತ್ತವೆ. ನಾನು ಚಿಕ್ಕೋಡಿ ಸಂಸದರಾದರೆ ಚಿಕ್ಕೋಡಿ ಜಿಲ್ಲೆ ರಚನೆಗೆ ಮೊದಲು ಆದ್ಯತೆ ನೀಡುವುದಾಗಿ ಹೇಳಿದರು. ಯಮಕನಮರಡಿಯ ಧುರೀಣ ಶಿವಪ್ಪ ಶಮರಂತ ಮಾತನಾಡಿ ಪಕ್ಷೇತರ ಅಭ್ಯರ್ಥಿ ಶಂಭು ಕಲ್ಲೋಳಿಕರ ಚಿಕ್ಕೋಡಿ ಲೋಕಸಭಾ ಚುನಾವಣಾ ಕಣಕ್ಕಿಳಿದಿದ್ದರಿಂದ ಎರಡು ರಾಜಕೀಯ ಪಕ್ಷಗಳ ನಾಯಕರುಗಳಿಗೆ ನಡುಕ ಹುಟ್ಟಿದ್ದು, ಈ ಹಿಂದೆ ಚಿಕ್ಕೋಡಿ ಲೋಕಸಭಾ ಚುನಾವಣೆಯಲ್ಲಿ ದತ್ತಾ ಕಟ್ಟಿ ಮತ್ತು ವ್ಹಿ.ಎಲ್. ಪಾಟೀಲ ಇವರು ಪಕ್ಷೇತರ ಅಭ್ಯರ್ಥಿಯಾಗಿ ಚುನಾವಣೆಯಲ್ಲಿ ಸ್ಪರ್ಧಿಸಿ ಜಯಗಳಿಸಿದರು.

2024ರ ಈ ಲೋಕಸಭಾ ಚುನಾವಣೆಯಲ್ಲಿ ಪಕ್ಷೇತರ ಅಭ್ಯರ್ಥಿ ಶಂಭು ಕಲ್ಲೋಳಿಕರ ಇವರನ್ನು ಆಯ್ಕೆ ಮಾಡಿ ಮತ್ತು ಪಕ್ಷೇತರ ಅಭ್ಯರ್ಥಿಯ ಇತಿಹಾಸ ಸೃಷ್ಟಿ ಮಾಡಬೇಕೆಮದರು. ಶಿವರುದ್ರ ಕಲ್ಲೋಳಿಕರ ಅಪ್ಪಾಸಾಹೇಬ ಬ್ಯಾಳಿ, ಅಮೂಲ ಶಿಂಧೆ ಮಾತನಾಡಿದರು.

ಸರ್ಕಾರಿ ಸೇವೆ ಆತ್ಮತೃಪ್ತಿ ತಂದಿದೆ–ಮಿಶ್ರೀಕೋಟಿ

ಎಇಇ ವಿಜಯ ಮಿಶ್ರೀಕೋಟಿಗೆ ಹೃದಯಸ್ಪರ್ಶಿ ವಿದಾಯ

ಹುಕ್ಕೇರಿ : ಸ್ವಂತ ತವರು ತಾಲೂಕಿನಲ್ಲಿಯೇ ಸರ್ಕಾರಿ ಸೇವೆ ಸಲ್ಲಿಸುವ ಅವಕಾಶ ಸಿಕ್ಕಿ ನಿವೃತ್ತಿಯಾಗುವ ಕ್ಷಣ ಒದಗಿಬಂದಿರುವು ನನ್ನ ಪೂರ್ವಜನ್ಮದ ಪೂಣ್ಯ ಮತ್ತು ಸೌಭಾಗ್ಯ ಎನಸುತ್ತದೆ. ಇಲ್ಲಿನ ಸೇವೆ ಆತ್ಮತೃಪ್ತಿ ತಂದಿದೆ ಎಂದು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಉಪವಿಭಾಗದ ನಿವೃತ್ತ ಎಇಇ ವಿಜಯ ಮಿಶ್ರೀಕೋಟಿ ಹೇಳಿದರು.

ಇಲ್ಲಿನ ತಾಲೂಕು ಪಂಚಾಯಿತಿ ಸಭಾಭವನದಲ್ಲಿ ಸರ್ಕಾರಿ ಸೇವೆಯಿಂದ ವಯೋನಿವೃತ್ತಿ ಹೊಂದಿದ ಪ್ರಯುಕ್ತ ತಮಗೆ ಏರ್ಪಡಿಸಿದ ಬೀಳ್ಕೋಡುವ ಸಮಾರಂಭದಲ್ಲಿ ಮಾತನಾಡಿದ ಅವರು, ಸೇವಾವಧಿಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗಿದೆ ಎಂದರು.

ಸುಮಾರು ನಾಲ್ಕು ವರ್ಷಗಳ ಅವಧಿಯಲ್ಲಿ ವಿವಿಧ ಇಲಾಖೆ ಅಧಿಕಾರಿಗಳು, ಗ್ರಾಪಂ ಆಡಳಿತ ಮಂಡಳಿ, ಜನಪ್ರತಿನಧಿಗಳು ಸೇರಿದಂತೆ ಹುಕ್ಕೇರಿ ತಾಲೂಕಿನ ಸಾರ್ವಜನಕರು ಸಾಕಷ್ಟು ಸಹಕಾರ ನೀಡಿದ್ದಾರೆ. ಇದರಿಂದ ಕುಡಿಯುವ ನೀರು ಪೂರೈಸುವ ಈ ಮಹತ್ವದ ಮತ್ತು ಕೆಲಸ ಪುಣ್ಯದ ಕೆಲಸವನ್ನು ಪ್ರಾಮಾಣಿಕವಾಗಿ ಮಾಡಿರುವುದಾಗಿ ಮಿಶ್ರೀಕೋಟಿ ಅವರು ಸೇವೆಯ ದಿನಗಳನ್ನು ನೆನೆದು ಕೆಲಕಾಲ ಭಾವುಕರಾದರು.

ಅಧ್ಯಕ್ಷತೆ ವಹಿಸಿದ್ದ ಬೆಳಗಾವಿ ಪಿಆರ್ಇ ಇಇ ಆನಂದ ಬಣಗಾರ ಮಾತನಾಡಿ, ಸರ್ಕಾರಿ ಸೇವೆಯಲ್ಲಿ ಬಡ್ತಿ, ವರ್ಗಾವಣೆ ಸಹಜ ಪ್ರಕ್ರಿಯೆಯಾಗಿದೆ. ಹಾಗೆಯೇ ನಿವೃತ್ತಿ ಕೂಡ ಹೊಂದಲೇಬೇಕು. ಅದರಂತೆ ಮಿಶ್ರೀಕೋಟಿ ನಿವೃತ್ತಿ ಜೀವನ ಸುಖಕರವಾಗಿರಲಿ. ಎಲ್ಲರೊಂದಿಗೆ ಬೆರೆಯುವ ಗುಣ, ಸಮಯಪ್ರಜ್ಞೆಯನ್ನು ಮಿಶ್ರೀಕೋಟಿ ಅವರಿಂದ ಕಲಿತುಕೊಳ್ಳಬೇಕು ಎಂದರು.

ಪಿಆರ್ಇ ಎಇಇ ಎಂ.ಎಸ್.ಬಿರಾದಾರಪಾಟೀಲ ಮಾತನಾಡಿ, ಶಿಸ್ತು, ಯೋಜನಾಬದ್ಧ ಆಡಳಿತದಿಂದ ಮಿಶ್ರೀಕೋಟಿ ವೃತ್ತಿಯಲ್ಲಿ ನೈಪುಣ್ಯತೆ ಹೊಂದಿ ಮಾದರಿ ಅಧಿಕಾರಿಯಾಗಿ ಹೊರಹೊಮ್ಮಿದ್ದಾರೆ. ಅವರು ಮಾಡಿರುವ ವಿವಿಧ ಅಭಿವೃದ್ಧಿ ಕೆಲಸಗಳು ಅಚ್ಚಳಿಯದೇ ಉಳಿದಿದ್ದು ಛಲಬಿಡದೇ ತಿವಿಕ್ರಮನಂತೆ ಅನೇಕ ಕೆಲಸಗಳನ್ನು ಸಾಧಿಸಿ ತೋರಿದ ಮಿಶ್ರೀಕೋಟಿ ಉತ್ತಮ ಒಡನಾಡಿ, ಅಚ್ಚುಮೆಚ್ಚಿನ ಅಧಿಕಾರಿ ಎಂದು ಬಣ್ಣಿಸಿದರು.

ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಟಿ.ಆರ್.ಮಲ್ಲಾಡದ ಮಾತನಾಡಿ, ಯಶಸ್ವಿ ಮತ್ತು ಪರಿಣಾಮಕಾರಿ ಕೆಲಸದಿಂದ ಮಿಶ್ರೀಕೋಟಿ ಯುವ ನೌಕರರು ಮತ್ತು ಸಿಬ್ಬಂದಿಗಳಿಗೆ ಆದರ್ಶ ಅಧಿಕಾರಿಯಾಗಿ ಹೊರಹೊಮ್ಮಿದ್ದಾರೆ. ಸರಳ, ಸಜ್ಜನ, ಸೌಮ್ಯ ಸ್ವಭಾವದ ಅವರ ಗುಣಲಕ್ಷಣಗಳು ಮೆಚ್ಚುವಂಥದ್ದು. ಶಿಸ್ತು ಬದ್ಧ ಜೀವನ ಶೈಲಿ ರೂಢಿಸಿಕೊಂಡು ಆಡಳಿತದ ವಿವಿಧ ಮಜಲುಗಳನ್ನು ಕಂಡಿದ್ದಾರೆ ಎಂದರು. ತಾಪಂ ಮಾಜಿ ಅಧ್ಯಕ್ಷ ದಸ್ತಗೀರ ಬಸ್ಲಾಪುರೆ, ಕಸಾಪ ಅಧ್ಯಕ್ಷ ಪ್ರಕಾಶ ಅವಲಕ್ಕಿ, ಪ್ರಭಾರಿ ಎಇಇ ರಾಜೇಂದ್ರ ಜಾಧವ, ನಿವೃತ್ತ ಅಧಿಕಾರಿ ಎ.ಬಿ.ಪಟ್ಟಣಶೆಟ್ಟಿ, ಅಭಿಯಂತರರಾದ ಬಿ.ಡಿ.ನಾಯಿಕವಾಡಿ, ಚೇತನ ಕಡಕೋಳ, ಸಂತೋಷ ಪಾಟೀಲ, ವಿಕಾಸ ಸವನೂರೆ, ಈರಪ್ಪಾ ಪಾಟೀಲ, ಗುತ್ತಿಗೆದಾರರಾದ ರವಿಂದ್ರ ಜಿಂಡ್ರಾಳಿ, ಈರಣ್ಣಾ ಬಿಸಿರೊಟ್ಟಿ, ರತ್ನಾಕರ ಬೋನ, ಮಾರ್ತಂಡ ಗೋಟೂರಿ, ಸಂಜಯ ಕಂಠಿ, ಡಿ.ಆರ್.ಪಿಡಾಯಿ, ಕುಮಾರ ದಿನ್ನಿಮನ, ಬಸವರಾಜ ದೇಸಾಯಿ, ಅಶೋಕ ತಳವಾರ, ಪ್ರಮೋದ ರಗಶೆಟ್ಟಿ, ಅಕ್ಷಯ ವೀರಮುಖ, ಈರಣ್ಣಾ ದೇಸಾಯಿ, ರಾಜಾರಾಮ ಬಡಿಗೇರ, ಆನಂದ ಚೌಗಲಾ, ಶಂಕರ ಪರೀಟ, ಅಡಿವೆಪ್ಪಾ ಕರೆನ್ನವರ, ಮತ್ತಿತರರು ಉಪಸ್ಥಿತರಿದ್ದರು.

ಮುಖ್ಯ ಶಿಕ್ಷಕ ಎಸ್.ಎಸ್.ಹಿರೇಮಠ ಸ್ವಾಗತಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಾಹಿತಿ ಲೀಲಾ ರಜಪೂತ ನಿರೂಪಿಸಿದರು. ದೀಪಕ ಕುಲಕರ್ಣಿ ಪರಿಚಯಿಸಿದರು. ನಾಗಯ್ಯ ಹಿರೇಮಠ ವಂದಿಸಿದರು. ಇದೇ ವೇಳೆ ವಿಜಯ ಮತ್ತು ರೂಪಾ ಮಿಶ್ರೀಕೋಟಿ ದಂಪತಿಯನ್ನು ವಿವಿಧ ಇಲಾಖೆ ಅಧಿಕಾರಿಗಳು, ವೃಂದ ನೌಕರರು, ಗುತ್ತಿಗೆದಾರರು ಹಾಗೂ ಸಾರ್ವಜನಕರು ಸನ್ಮಾನಿಸಿ ಗೌರವಿಸಿದರು.

ಗ್ರಾಮದ ಮಹಿಳೆಯರ ಕೈಯಲ್ಲಿ ಪ್ರದರ್ಶನಗೊಂಡ ಮತದಾನ ಜಾಗೃತಿ ಮೆಹಂದಿ

ರೋಣ : ಅಬ್ಬಿಗೇರಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕೆಲಸ ಮಾಡುವ ಗ್ರಾಮ ಪಂಚಾಯತಿ ಸಿಬ್ಬಂದಿಗಳು, ಎನ್.ಆರ್. ಎಲ್.ಎಂ ಮಹಿಳಾ ಸಂಘಟನೆಗಳ ಸದಸ್ಯರು, ಅಂಗನವಾಡಿ ಕಾರ್ಯಕರ್ತರು ಗ್ರಾಮದ ಪ್ರತಿ ಮನೆ ಮನೆಗೆ ಭೇಟಿ ನೀಡಿ ಮನೆಯಲ್ಲಿನ ಮಹಿಳೆಯರಿಗೆ ಕೈಯಲ್ಲಿ ಮತದಾನ ಜಾಗೃತಿ ಮೂಡಿಸುವ ಮೆಹಂದಿಯನ್ನು ಬಿಡಿಸುವ ಮೂಲಕ ಕಡ್ಡಾಯ ಮತದಾನ ಜಾಗೃತಿಯನ್ನು ಸಾರ್ವಜನಕರಲ್ಲಿ ಮೂಡಿಸುವ ಮೂಲಕ ವಿಶಿಷ್ಟ ಮತದಾನ ಜಾಗೃತಿ ಕಾರ್ಯಕ್ರಮ ಜರುಗಿತು.

ಗ್ರಾಮ ಪಂಚಾಯತಿಯಲ್ಲಿ 50 ಕ್ಕೂ ಹೆಚ್ಚು ಮಹಿಳೆಯರು ಒಟ್ಟೂಗೂಡಿ ಗ್ರಾಮದ ಪ್ರತಿ ಮನೆ ಮನೆಗೆ ಭೇಟಿ ನೀಡಿ ವಿವಿಧ ಘೋಷಣೆಗಳ ಬರಹ, ಅಲಂಕಾರಿಕ ಜಾಗೃತಿ ಮೂಡಿಸುವ ಚಿತ್ರಗಳು ಮತ್ತು ವಿವಿಧ ಡಿಸೈನ್ ಗಳನ್ನು ಗ್ರಾಮದ ಮಹಿಳೆಯರ ಕೈಯಲ್ಲಿ ಬಿಡಿಸುವ ಮೂಲಕ ಮೇ–7 ರಂದು ಕಡ್ಡಾಯವಾಗಿ ಮತದಾನ ಮಾಡುವಂತೆ ತಿಳಿಸಿದರು.

ಮೇ 7 ರಂದು ಮತದಾನ ಮಾಡು. ಚುನಾವಣಾ ಪರ್ವ ದೇಶದ ಗರ್ವ, ನನ್ನ ಮತ ನನ್ನ ಹಕ್ಕು, ನಮ್ಮ ಮತ ದೇಶಕ್ಕೆ ಹಿತ, ಕಡ್ಡಾಯವಾಗಿ ಮತದಾನ ಮಾಡಿ ಮತ್ತು ಮತದಾನ ನಮ್ಮ ಹಕ್ಕು ಎಂಬ ಘೋಷಣೆಗಳ ಬರಹಗಳನ್ನು ಮೆಹಂದಿ ಮೂಲಕ ಗ್ರಾಮದ ಮಹಿಳೆಯರಿಗೆ ಹಾಗೂ ತಮ್ಮ ಕೈಯಲ್ಲಿ ಬಿಡಿಸಿಕೊಂಡರು. ಮತದಾನ ಜಾಗೃತಿ ಕುರಿತಾದ ಚಿತ್ರಗಳನ್ನು ಕೈಯಲ್ಲಿ ಬಿಡಿಸಿಕೊಂಡು ಮತದಾನ ಜಾಗೃತಿ ಸಾರಿದರು. ಸಾರ್ವಜನಕರು ಕೂಡಾ ಮಹಿಳೆಯರು ಕೈಯಲ್ಲಿ ಬಿಡಿಸಿಕೊಂಡ ಮತದಾನದ ಚಿತ್ರಗಳನ್ನು ನೋಡಿ ಅನಂದಿಸಿದರು.

ಗ್ರಾಮದ ಮಹಿಳೆಯರಿಗಾಗಿ ಮೆಹಂದಿ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಲೋಹಿತ ಎಂ ಮಾತನಾಡಿ ಮೆಹಂದಿ ಕೈಯಲ್ಲಿ ಬಿಡಿಸಿಕೊಳ್ಳುವುದು ಮಹಿಳೆಯರಿಗೆ ಇಷ್ಟವಾದ ಕೆಲಸ. ಮತದಾನ ಜಾಗೃತಿ ಕುರಿತು ಮಹಿಳೆಯರು ವಿವಿಧ ಬರಹಗಳನ್ನು ಕೈಯಲ್ಲಿ ಬಿಡಿಸಿಕೊಂಡು ಜಾಗೃತಿ ಮೂಡಿಸುವ ಕಾರಣದಿಂದ ಪ್ರತಿ ಮನೆಗೂ ಮತದಾನ ಜಾಗೃತಿ ಮಾಡಿದಂತಾಗುತ್ತದೆ ಎಂದರು..

ಕಡ್ಡಾಯ ಮತದಾನ ಜಾಗೃತಿ ಕಾರ್ಯಕ್ರಮದಲ್ಲೂ ವಿಭಿನ್ನವಾಗಿ ಜಾಗೃತಿ ಮೂಡಿಸುವ ಕೆಲಸವನ್ನು ಮಹಿಳಾ ಸಂಘಟನೆಗಳು ಮಾಡುತ್ತಿವೆ. ಇಂದು ಅಬ್ಬಿಗೇರಿ ಹೋಬಳಿ ಮಟ್ಟದಲ್ಲಿ ಮೆಹಂದಿ ಮೂಲಕ ಮತದಾನ ಜಾಗೃತಿ ಬಗ್ಗೆ ಸಾರ್ವಜನಕ ರಲ್ಲಿ ತಿಳುವಳಿಕೆ ಮೂಡಿಸಿದ ಕಾರ್ಯ ಮಹಿಳಾ ಸಂಘಟನೆಗಳ ಹಾಗೂ ಎಲ್ಲಾ ಸದಸ್ಯರಿಗೂ ಖುಷಿ ತಂದಿದೆ ಎಂದರು. ಈ ಕಾರ್ಯಕ್ರಮದಲ್ಲಿ ಗ್ರಾಮ ಕಾಯಕ ಮಿತ್ರ, ಕಾಯಕ ಬಂಧುಗಳು ಅಂಗನವಾಡಿ ಕಾರ್ಯಕರ್ತೆಯರು ಆಶಾ ಕಾರ್ಯಕರ್ತೆಯರು ಸಂಜೀವಿನ ಒಕ್ಕೂಟದ ಸದಸ್ಯರು ಗ್ರಾಮ ಪಂಚಾಯಿತಿ ಸಿಬ್ಬಂದಿಗಳು ಸೇರಿದಂತೆ ಸಾರ್ವಜನಕರು ಪಾಲ್ಗೊಂಡಿದ್ದರು.

ಶರಣರ ಜೀವನ ತತ್ವಗಳ ಅನುಸರಣೆ ಅಗತ್ಯ: ಕಡಕೋಳ ಶ್ರೀಗಳು

ಯರಗಟ್ಟಿ: 'ಸಂತರು ಮತ್ತು ಶರಣರನ್ನು ಕೇವಲ ಆಚರಣೆಗೆ ಮಾತ್ರ ಸೀಮಿತಗೊಳಿಸದೆ ಅವರ ಜೀವನ ತತ್ವಗಳನ್ನು ಅನುಸರಿಸುವ ಕಾರ್ಯ ನಡೆಯಬೇಕಿದೆ' ಎಂದು ಕಟಕೋಳದ ಸಚ್ಚಿದಾನಂದ ಮಹಾಸ್ವಾಮಿಗಳು ತಿಳಿಸಿದರು.

ಬುಧವಾರ ಸ್ಥಳೀಯ ಮಹಾಂತ ದುರದುಂಡೇಶ್ವರ ಶ್ರೀಮಠದ ಆವರಣದಲ್ಲಿ ಬಸವ ಜಯಂತಿ ಹಾಗೂ ಮರಡಿ ಬಸವೇಶ್ವರ ಜಾತ್ರಾ ನಿಮಿತ್ಯ ಶರಣರ ಚರಿತಾಮೃತ ಪ್ರವಚನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

'ಯುವಜನಾಂಗ